AUGUST 17, 2025

**AKASHAVANI - DHARWAD**

**PRADESH SAMACHARA (KANNADA) 12.00 P.M.**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

**ಸಹಕಾರಿ ಕ್ಷೇತ್ರದ ಮೂಲಕ** ಜನಸಾಮಾನ್ಯರ ಬದುಕಿನಲ್ಲಿ ಆರ್ಥಿಕ ಸುದೃಢತೆ ಸಾಧ್ಯವಿದೆ. ಕರ್ನಾಟಕ ರಾಜ್ಯವು ಭಾರತದಲ್ಲೇ ಉತ್ತಮ ಸಹಕಾರಿ ಸಂಘಟನೆಗಳನ್ನು ಹೊಂದಿರುವ ರಾಜ್ಯವಾಗಿದೆ ಎಂದು ಹಾವೇರಿ ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು. ಕರ್ನಾಟಕ ಸಹಕಾರ ಹಾಲು ಉತ್ಪಾದಕರ ಮಹಾಮಂಡಳ ನಿಯಮಿತ, ಬೆಂಗಳೂರು, ಜಿಲ್ಲಾ ಸಹಕಾರ ಹಾಲು ಉತ್ಪಾದಕರ ಸಂಘಗಳ ಒಕ್ಕೂಟದ ಸಂಯುಕ್ತ ಆಶ್ರಯದಲ್ಲಿ, ಹಾವೇರಿಯಲ್ಲಿ ನೂತನ ಆಡಳಿತ ಕಚೇರಿ ಕಟ್ಟಡ ಉದ್ಘಾಟನೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

<><><>

**ಧ್ವನಿ: ಬಸವರಾಜ ಬೊಮ್ಮಾಯಿ 38 ಸೆಕೆಂದುಗಳು**

<><><>

**ಭಾರತ ದೇಶದ ಸಂಸ್ಕೃತಿ, ಪರಂಪರೆ** ಹಾಗೂ ಆಚರಣೆಗಳು ವಿಶಿಷ್ಟ ಹಾಗೂ ವಿಭಿನ್ನವಾಗಿದ್ದು, ವಿದೇಶಿಗರೂ ಕೂಡಾ ಭಾರತಕ್ಕೆ ಆಗಮಿಸಿ ಇದರ ಬಗ್ಗೆ ಅಧ್ಯಯನ, ಸಂಶೋಧನೆ ಕೈಗೊಂಡು, ಅದರ ಮೌಲ್ಯವನ್ನು ಅಳವಡಿಸಿಕೊಳ್ಳುವಲ್ಲಿ ಆಸಕ್ತಿ ವಹಿಸುತ್ತಿದ್ದಾರೆ. ಜನಪದ ಸಂಸ್ಕೃತಿಯಲ್ಲಿ ಹಾವು, ಗೋವು, ಎತ್ತು, ಗುಳ್ಳವ್ವ, ಗಣಪತಿ, ಜೋಕುಮಾರರಂತಹ ಮಣ್ಣಿನ ಪೂಜೆಯ ಆಚರಣಾ ಪರಂಪರೆಗಳು ಪ್ರಕೃತಿಯನ್ನು ಪೂಜಿಸುವ ಆರಾಧನಾ ಕ್ರಮಗಳಾಗಿವೆ ಎಂದು ಕೇಂದ್ರ ನವ ಮತ್ತು ನವೀಕರಿಸಬಹುದಾದ ಇಂಧನಗಳ ಖಾತೆ ಸಚಿವರಾದ ಪ್ರಲ್ಹಾದ್ ಜೋಶಿ ಹೇಳಿದರು. ಹುಬ್ಬಳ್ಳಿಯಲ್ಲಿ ಡಾಕ್ಟರ ರಾಮು ಮೂಲಗಿ ಅವರು ರಚಿಸಿರುವ ಪ್ರಬಂಧ ಹಾಗೂ ಹಾಡುಗಳಿರುವ 'ಮಣ್ಣು ಪೂಜೆಗಳು', ಕೃತಿ ಲೋಕಾರ್ಪಣೆಗೊಳಿಸಿ ಅವರು ಮಾತನಾಡಿದರು. ಭಾರತೀಯರಾದ ಎಲ್ಲರೂ ನೆಲದ ಸಂಸ್ಕೃತಿ ಹಾಗೂ ಆಚಾರ, ವಿಚಾರಗಳ ಬಗ್ಗೆ ಅಭಿಮಾನ, ಹೆಮ್ಮೆಯಿರಿಸಬೇಕು ಎಂದರು.

<><><>

**ಕೃಷಿ ಕೂಲಿ ಕಾರ್ಮಿಕರ ಸಮಸ್ಯೆಗಳನ್ನು** ನಿಯಮಾನುಸಾರ ಪರಿಹರಿಸಿ, ವರದಿ ನೀಡುವಂತೆ ಕೃಷಿ ಇಲಾಖೆ ಹಾಗೂ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಎನ್. ಚಲುವರಾಯಸ್ವಾಮಿ ಹೇಳಿದ್ದಾರೆ. ಮಂಡ್ಯ ನಗರದ ಜಿಲ್ಲಾ ಪಂಚಾಯತ್, ಕಾವೇರಿ ಸಭಾಂಗಣದಲ್ಲಿ ಸಭೆ ನಡೆಸಿ ಅವರು ಮಾತನಾಡಿದರು. ವಸತಿ ಹಾಗೂ ನಿವೇಶನ ರಹಿತ ಬಡ ಕುಟುಂಬಗಳಿಗೆ ಗ್ರಾಮೀಣ ಭಾಗದಲ್ಲಿ ನಿವೇಶನ ಒದಗಿಸಲು ಸರ್ಕಾರಿ ಭೂಮಿ ಇದ್ದಲ್ಲಿ  ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಅಗತ್ಯ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು.

<><><>

**ಗ್ರಾಮೀಣ ಭಾಗದ ಜನರಿಗೆ** ಶುದ್ಧ ಕುಡಿಯುವ ನೀರು, ಚರಂಡಿ ವ್ಯವಸ್ಥೆ, ರಸ್ತೆಗಳು ಸೇರಿದಂತೆ ಅವಶ್ಯಕ ಮೂಲಸೌಕರ್ಯಗಳನ್ನು ಒದಗಿಸಲು ಅಧಿಕಾರಿಗಳು ಮುಂದಾಗಬೇಕು. ಸರ್ಕಾರ ಬಿಡುಗಡೆ ಮಾಡುವ ಅನುದಾನ ಸಮರ್ಪಕವಾಗಿ ಬಳಕೆಯಾಗಬೇಕು ಎಂದು ಧಾರವಾಡ ಜಿಲ್ಲಾ ಪಂಚಾಯತ ಮುಖ್ಯ ಯೋಜನಾಧಿಕಾರಿ ದೀಪಕ ಮಡಿವಾಳರ ಹೇಳಿದ್ದಾರೆ. ಹುಬ್ಬಳ್ಳಿ ತಾಲೂಕು ಆಡಳಿತಸೌಧದ, ಸಭಾಭವನದಲ್ಲಿ ಜರುಗಿದ ಸಾಮಾನ್ಯ ಸಭೆಯಲ್ಲಿ ಪಾಲ್ಗೊಂಡು ಅವರು ಮಾತನಾಡಿದರು, ಜನರಿಗೆ ಶುದ್ಧ ಕುಡಿಯುವ ನೀರನ್ನು ಒದಗಿಸಲು ಗ್ರಾಮೀಣ ಕುಡಿಯುವ ನೀರು ಯೋಜನೆಗಳನ್ನು ಕಾಲಮಿತಿಯಲ್ಲಿ ಪೂರ್ಣಗೊಳಿಸಬೇಕು ಮತ್ತು ನೀರಿನ ಶುದ್ಧತೆಯನ್ನು ನೈರ್ಮಲ್ಯ ಇಲಾಖೆ ಅಧಿಕಾರಿಗಳು ಖಾತ್ರಿಪಡಿಸಿಕೊಳ್ಳಬೇಕು ಎಂದು ಸೂಚಿಸಿದರು.

<><><>

**ಕಲಬುರಗಿ ಜಿಲ್ಲೆ, ಕಾಳಗಿ ಪಟ್ಟಣ** ಪಂಚಾಯಿತಿಯ ಒಟ್ಟು 11 ವಾರ್ಡ್‌ಗಳಿಗೆ ಮತದಾನವು ಶಾಂತಿಯುತವಾಗಿ ನಡೆಯುತ್ತಿದೆ. ಮತದಾನ ನಡೆಯುತ್ತಿರುವ ಮತಗಟ್ಟೆಗಳ 200 ಮೀಟರ್ ವ್ಯಾಪ್ತಿಯಲ್ಲಿ, ಭಾರತೀಯ ನ್ಯಾಯ ಸಂಹಿತಾ, ಸೆಕ್ಷನ್ 163 ಅನ್ವಯ ಮತದಾರರು ಹಾಗೂ ಚುನಾವಣೆ ಸಂಬಂಧಪಟ್ಟವರನ್ನು ಹೊರತುಪಡಿಸಿ ಇತರರ ಪ್ರವೇಶವನ್ನು ನಿರ್ಭಂಧಿಸಲಾಗಿದೆ.

<><><>

**ಕೋಲಾರ ಜಿಲ್ಲೆಯ ವೇಮಗಲ್** – ಕುರುಗಲ್ ಪಟ್ಟಣ ಪಂಚಾಯಿತಿಯ, 17 ಸ್ಥಾನಗಳಿಗೆ ಇಂದು ಬೆಳಿಗ್ಗೆ 7 ಗಂಟೆಯಿಂದ ಮತದಾನ ಶುರುವಾಗಿದ್ದು, 9 ಗಂಟೆ ವೇಳೆಗೆ ಶೇಕಡ 10 ದಶಾಂಶ 7, 4 ರ ಷ್ಟ ಮತದಾನವಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಮಂಗಳಾ ಎಸ್.ಎಂ ತಿಳಿಸಿದ್ದಾರೆ.

<><><>

**ಭಗವಾನ್ ಶ್ರೀಕೃಷ್ಣ ನೀಡಿರುವ ಸಂದೇಶಗಳು** ಸಾರ್ವಕಾಲಿಕವಾಗಿದ್ದು, ಉತ್ತಮ ಜೀವನ ರೂಪಿಸಲು ಪ್ರೇರಣೆಯಾಗಿವೆ ಎಂದು ಹಿರಿಯ ಚಿಂತಕ ಜಿ. ನಾ ಸೋಮೇಶ್ ಹೇಳಿದರು. ಮಡಿಕೇರಿಯಲ್ಲಿ ಜರುಗಿದ ಶ್ರೀಕೃಷ್ಣ ಜನ್ಮಾಷ್ಟಮಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು, ಅವರು ಮಾತನಾಡಿದರು.

<><><>

**ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತದ** ಭವನದಲ್ಲಿ ಜರುಗಿದ ಶ್ರೀಕೃಷ್ಣ ಜನ್ಮಾಷ್ಟಮಿ ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಎ.ಬಿ ಬಸವರಾಜು ಅವರು ಶ್ರೀಕೃಷ್ಣನ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ, ನಮನ ಸಲ್ಲಿಸಿದರು. ಹೊಸಪೇಟೆ ನಗರದ ವೇಣುಗೋಪಾಲ ದೇವಸ್ಥಾನ , ಶ್ರೀಕೃಷ್ಣ ಮಠದಲ್ಲಿ ಜನ್ಮಾಷ್ಟಮಿ ಪ್ರಯುಕ್ತ ವಿಶೇಷ ಪೂಜೆ ಹಾಗೂ ಧಾರ್ಮಿಕ ಕಾರ್ಯಕ್ರಮಗಳು ಜರುಗಿದವು.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು**

<><><>

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ**

<><><>